KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE

**ಅಧಿವೇಶನ** ಕೊರೋನಾ ಹಿನ್ನೆಲೆಯಲ್ಲಿ 10 ದಿನಗಳ ವಿಧಾನಮಂಡಲ ಅಧಿವೇಶನ

# ಇಂದಿನಿಂದ ರಾಜ್ಯದಲ್ಲಿ ಸದನ ಕದನ ಪ್ರಾರಂಭ!

## ಕೊರೋನಾ ಭ್ರಷ್ಟಾಚಾರ, ಆರ್ಥಿಕ ಕುಸಿತ ಬಗ್ಗೆ ಮುಗಿಬೀಳಲು ವಿಪಕ್ಷ ಸಜ್ಜು । ತಿರುಗೇಟಿಗೆ ಬಿಜೆಪಿ ಸಿದ್ಧ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಶತಮಾನದಲ್ಲೇ ಕೇಳರಿಯದ ಕೊರೋನಾ ಸೋಂಕಿನ ಕರಿನೆರಳಿನ ನಡುವೆಯೇ ಸೋಮವಾರದಿಂದ ರಾಜ್ಯದ ವಿಧಾನಮಂಡಲದ ಉಭಯ ಸದನಗಳ ಅಧಿವೇಶನ ಆರಂಭವಾಗಲಿದೆ.

ಕೋವಿಡ್ ನಿರ್ವಹಣೆ, ಆರ್ಥಿಕ ಕುಸಿತ, ನೆರೆ ಪರಿಹಾರ, ಹಲವು ವಿವಾದಾತ್ಮಕ ವಿಧೇಯಕಗಳು, ಪ್ರಸಕ್ತ ಡ್ರಗ್ಸ್ ಮಾಫಿಯಾ, ಡಿಜೆ ಹಳ್ಳಿ ಗಲಭೆ ಸೇರಿದಂತೆ ಹಲವು ವಿಚಾರಗಳ ಬಗ್ಗೆ ಮುಂದಿನ ಹತ್ತು ದಿನಗಳ ಕಾಲ ಆಡಳಿತಾರೂಢ ಬಿಜೆಪಿ ಮತ್ತು ಪ್ರತಿಪಕ್ಷ ಕಾಂಗ್ರೆಸ್-ಜೆಡಿಎಸ್ ನಡುವೆ ಮುಖಾಮುಖಿ ವಾಕ್ಸಮರ ನಡೆಯಲಿದೆ.

ಸರ್ಕಾರದ ವಿರುದ್ಧ ಮುಗಿ ಬೀಳಲು ಪ್ರಮುಖ ವಿರೋಧ ಪಕ್ಷ ಕಾಂಗ್ರೆಸ್ ಸಾಲು-ಸಾಲು ವಿಷಯಗಳನ್ನು ಪಟ್ಟಿ ಮಾಡಿಕೊಂಡಿದ್ದು ಪ್ರಶ್ನೆಗಳ ಸುರಿಮಳೆ ಸುರಿಸಲು ಇದೇ ಮೊದಲ ಬಾರಿಗೆ 1,200ಕ್ಕೂ ಹೆಚ್ಚು ಪ್ರಶ್ನೆಗಳ 'ಪ್ರಶ್ನೆ ಬ್ಯಾಂಕ್' ಮಾಡಿದೆ. ಇನ್ನು ಕಾಂಗ್ರೆಸ್, ಜೆಡಿಎಸ್‌ನ ದಾಳಿಗೆ ಡ್ರಗ್ಸ್ ಹಗರಣದ ಆಳವಾದ ತನಿಖೆ, ಡಿ.ಜೆ. ಹಳ್ಳಿ ಹಾಗೂ ಕೆ.ಜಿ. ಹಳ್ಳಿ ಪ್ರಕರಣಗಳನ್ನು ಬಳಸಿಕೊಂಡು ತಿರುಗೇಟು ನೀಡಲು ಆಡಳಿತಾರೂಢ ಬಿಜೆಪಿಯೂ ಸಜ್ಜಾಗಿದೆ. ಅಲ್ಲದೆ ವಿರೋಧಪಕ್ಷಗಳ ವಿರೋಧದ ನಡುವೆಯೇ ಹಲವು ವಿವಾದಾತ್ಮಕ ಕಾಯಿದೆ ತಿದ್ದುಪಡಿ ವಿಧೇಯಕಗಳ ಮಂಡನೆಗೆ ಮುಂದಾಗಿದೆ. ಹೀಗಾಗಿ ಸಹಜವಾಗಿಯೇ ಸದನವು ಕದನ ಕುತೂಹಲ ಕೆರಳಿಸಿದೆ.

**ಕಲಾಪದಲ್ಲಿ ಏನೇನು?:** ಸೋಮವಾರ ಬೆಳಗ್ಗೆ 11 ಗಂಟೆಗೆ ಪ್ರಾರಂಭವಾಗಲಿರುವ ವಿಧಾನಸಭೆಯಲ್ಲಿ ಅಗಲಿದ ಗಣ್ಯರಿಗೆ ಸಂತಾಪ ಸೂಚಕ ನಿರ್ಣಯ ಮಂಡಿಸಿದ ಬಳಿಕ ಪ್ರಶ್ನೋತ್ತರ ಅವಧಿ ಕೈಗೆತ್ತಿಕೊಳ್ಳಲಾಗುವುದು. ಬಳಿಕ ರಾಷ್ಟ್ರಪತಿ, ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸಲಾಗುವುದು.

ಈ ವೇಳೆ ಸುಗ್ರೀವಾಜ್ಞೆ ಮೂಲಕ ಹೊರಡಿಸಿರುವ ಎಪಿಎಂಸಿ ಕಾಯಿದೆ ತಿದ್ದುಪಡಿ, ಭೂ ಸುಧಾರಣೆ ಕಾಯಿದೆ, ಕಾರ್ಮಿಕ ಕಾಯಿದೆ ತಿದ್ದುಪಡಿಗಳು ಮಂಡನೆಯಾಗುವ ಸಾಧ್ಯತೆ ಇದೆ. ಧನವಿನಿಯೋಗ ಮತ್ತು ಹಣಕಾಸು ಲೆಕ್ಕಗಳ ಸಿಎಜಿ ವರದಿ, 2019ರ ಮಾರ್ಚ್ ವರೆಗಿನ ಹಣಕಾಸಿನ ವ್ಯವಹಾರಗಳ ಸಿಎಜಿ ವರದಿ ಮಂಡನೆಯಾಗಲಿದೆ. ➘ 5



**ಪ್ರಮುಖ ಮಸೂದೆಗಳ ಮಂಡನೆ**

**ಎಪಿಎಂಸಿ ಕಾಯಿದೆ ತಿದ್ದುಪಡಿ, ಭೂ ಸುಧಾರಣೆ ಕಾಯಿದೆ, ಕಾರ್ಮಿಕ ಕಾಯಿದೆ ತಿದ್ದುಪಡಿ**

# ಅಧಿವೇಶನ ಮೂರು ದಿನಕ್ಕೆ ಮೊಟಕು?

## ಕೊರೋನಾ ಕಾರಣಕ್ಕೆ ಮೊಟಕು

**ಬೆಂಗಳೂರು:** ರಾಜ್ಯದಲ್ಲಿ ಕೊರೋನಾ ಸೋಂಕು ವ್ಯಾಪಕವಾಗಿ ಹರಡುತ್ತಿರುವ ಹಾಗೂ ಅನೇಕ ಶಾಸಕ, ಸಚಿವರಿಗೆ ಸೋಂಕು ತಗಲಿರುವ ಹಿನ್ನೆಲೆಯಲ್ಲಿ ಸೋಮವಾರದಿಂದ ಆರಂಭವಾಗಲಿರುವ ವಿಧಾನ ಮಂಡಲದ ಅಧಿವೇಶನವನ್ನು ಮೂರು ದಿನಕ್ಕೆ ಮೊಟಕುಗೊಳಿಸುವ ಪ್ರಯತ್ನ ರಾಜ್ಯ ಸರ್ಕಾರದಿಂದ ಆರಂಭವಾಗಿದೆ. ಹಲವು ಸಚಿವರು ಹಾಗೂ ಶಾಸಕರಿಗೆ ಕೊರೋನಾ ಸೋಂಕು ತಗುಲಿರುವುದರಿಂದ ಮುನ್ನೆಚ್ಚರಿಕೆ ಕ್ರಮವಾಗಿ ಮೂರು ದಿನಕ್ಕೆ ಅಧಿವೇಶನ ಮೊಟಕುಗೊಳಿಸೋಣ. ➘ 5